5

ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ

## ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಟ್ಟಡಗಳು,ನೃಪತುಂಗ ರಸ್ತೆ, ಬೆಂಗಳೂರು-560001

**ಸಂಖ್ಯೆ: ಸಿ7[5]ಪ್ರಾಶಿಅ:ಆಂ.ನೋಂದಣಿ/47/2012-13** **ದಿನಾಂಕ: 23/03/2013**

**ನಮೂನೆ-2**

**(ನಿಯಮ 3 ಉಪನಿಯಮ 5 (ಬಿ)**

**ಪ್ರಮಾಣ ಪತ್ರ ಸಂಖ್ಯೆ : 157/2013-14**

**ಗ್ರಾಮಭಾರತಿ ವಿದ್ಯಾ ಸಂಸ್ಥೆ [ರಿ], ಮೈಸೂರು -ಚನ್ನರಾಯಪಟ್ಟಣ ರಸ್ತೆ, ಕೆ.ಆರ್.ಪೇಟೆ ಟೌನ್, ಮಂಡ್ಯ ಜಿಲ್ಲೆ.** ಇವರಿಗೆ ಕರ್ನಾಟಕ ಶಿಕ್ಷಣ ಕಾಯ್ದೆ 1983 (ಕರ್ನಾಟಕ ಆ್ಯಕ್ಟ್ 1995) ಸೆಕ್ಷನ್ 31 ರಂತೆ ಹಾಗೂ ಸರ್ಕಾರದ ಆದೇಶ ಸಂಖ್ಯೆ: ಇಡಿ 44 ಪಿ ಜಿ ಸಿ 2002, ದಿನಾಂಕ : 11.06.2002 ರ ಪ್ರಕಾರ ಈ ಕೆಳಗೆ ನಮೂದಿಸಿರುವ ಶಿಕ್ಷಣ ಸಂಸ್ಥೆಯನ್ನು **ಕ್ರಮ ಸಂಖ್ಯೆ 157, ಪುಟ ಸಂಖ್ಯೆ: 145, ವಾಲ್ಯೂಂ ಸಂಖ್ಯೆ: 16**ರಲ್ಲಿ ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋಂದಣಿ ವಹಿಯಲ್ಲಿ ನೋಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಲಾಗಿದೆ.

| | | |
|---|---|---|
| 1. | ಕ್ರಮ ಸಂಖ್ಯೆ | **157/2013-2014** |
| 2. | ಶಾಲೆಯ ಹೆಸರು ಮತ್ತು ವಿಳಾಸ | **ಗ್ರಾಮಭಾರತಿ ಹಿರಿಯ ಪ್ರಾಥಮಿಕ ಶಾಲೆ, ಮೈಸೂರು-ಚನ್ನರಾಯಪಟ್ಟಣ ರಸ್ತೆ, ಕೆ.ಆರ್.ಪೇಟೆ ಟೌನ್, ಮಂಡ್ಯ ಜಿಲ್ಲೆ.** |
| 3. | ಅನುಮತಿ ನೀಡಿದ ತರಗತಿ | **6 ನೇ ತರಗತಿ 7 ನೇ ತರಗತಿ ಮತ್ತು 8ನೇ ತರಗತಿ [ಶಾಶ್ವತ ಅನುದಾನರಹಿತವಾಗಿ] [Permanently without-aid]** |
| 4. | ಪ್ರಾರಂಭಿಸಬೇಕಾದ ಶೈಕ್ಷಣಿಕ ವರ್ಷ | **2013-2014 2014-2015 2015-2016 ಶಾಶ್ವತ ಅನುದಾನ ರಹಿತವಾಗಿ** |
| 5. | ಅನುಮತಿ ನೀಡಿದ ಮಾಧ್ಯಮ | **ಆಂಗ್ಲ ಮಾಧ್ಯಮ** |
| 6. | ಶುಲ್ಕ ಪಾವತಿ ಮಾಡಿರುವುದು | **ರೂ. 10,000/-** |

ಈ ನೋಂದಣಿ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ನೀಡಲಾಗಿದೆ. ಇದರಲ್ಲಿ ಯಾವುದೇ ಷರತ್ತನ್ನು ಉಲ್ಲಂಘಿಸಿದಲ್ಲಿ ಮೇಲ್ಕಂಡ [ನೋಂದಣಿ] ಅನುಮತಿಯನ್ನು ರದ್ದುಪಡಿಸುವ ಅಧಿಕಾರವನ್ನು ಇಲಾಖೆಯು ಕಾಯ್ದಿರಿಸಿಕೊಂಡಿದೆ.

1. ಈ ನೋಂದಾವಣೆಯು ಕರ್ನಾಟಕ ಶಿಕ್ಷಣ ಸಂಸ್ಥೆಗಳು [ಖಾಸಗಿ ಶಿಕ್ಷಣ ಸಂಸ್ಥೆಗಳ ನಿಯಂತ್ರಣ,ವರ್ಗೀಕರಣ]ನಿಯಮ-1997 ನಿಯಮ-3 [5] [ಡಿ] ನಲ್ಲಿ ಸೂಚಿಸಿರುವ ಅಂಶಗಳಿಗೆ ಒಳಪಟ್ಟಿರುತ್ತದೆ.
2. ಕರ್ನಾಟಕ ಶಿಕ್ಷಣ ಸಂಸ್ಥೆಗಳು (ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯವಸ್ತು ನಿಗಧೀಕರಣ ಇತ್ಯಾದಿ) ನಿಯಮಾವಳಿಗಳು 1995ರ ನಿಯಮ 4, 5, 6 ಮತ್ತು 8 ರನ್ವಯ ಸುರಕ್ಷತಾ ಕ್ರಮವಾಗಿ, ಶಾಲಾ ಕಟ್ಟಡವು ಕಡ್ಡಾಯವಾಗಿ ಉತ್ತಮ ಗುಣಮಟ್ಟದ ಮೇಲ್ಛಾವಣಿಯನ್ನು ಹೊಂದಿದ್ದು, ಉತ್ತಮ ಗಾಳಿ ಬೆಳಕಿಗೆ ಅವಕಾಶವಿರಬೇಕು. ಗಂಡು ಮತ್ತು ಹೆಣ್ಣು ಮಕ್ಕಳಿಗೆ ಪ್ರತ್ಯೇಕ ಶೌಚಾಲಯಗಳನ್ನು ಒದಗಿಸಬೇಕು. ಕುಡಿಯುವ ನೀರನ್ನು ಒದಗಿಸಿರಬೇಕು. ಶಾಲಾ ಆವರಣದಲ್ಲಿರುವ ಅಪಾಯಕಾರಿ ಸ್ಥಳಗಳಿಗೆ ಬೇಲಿ ಹಾಕಿ, ಶಾಲಾ ಆವರಣಕ್ಕೆ ಮಕ್ಕಳ ಸುರಕ್ಷತೆಗಾಗಿ ಕಾಂಪೌಂಡನ್ನು ಕಡ್ಡಾಯವಾಗಿ ನಿರ್ಮಿಸತಕ್ಕದ್ದು. ಮತ್ತು ಬೆಂಕಿ ಆಕಸ್ಮಿಕಗಳನ್ನು ತಪ್ಪಿಸಲು ಅಗತ್ಯ ಸುರಕ್ಷತಾ ಕ್ರಮಗಳನ್ನು ತೆಗೆದುಕೊಳ್ಳಬೇಕು.
3. ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
4. ಕರ್ನಾಟಕ ಶಿಕ್ಷಣ ಕಾಯ್ದೆ ಸೆಕ್ಷನ್-41[5] ರಂತೆ ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.
5. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿ ನಡೆಸತಕ್ಕದ್ದು ಮತ್ತು ಯಾವುದೇ ಕಾರಣಕ್ಕೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹಸ್ತಾಂತರಿಸತಕ್ಕದ್ದಲ್ಲ.
6. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸಿದ ಎಲ್ಲಾ ಸರ್ಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ 1983 [ಕರ್ನಾಟಕ ಆ್ಯಕ್ಟ್ ಸಂಖ್ಯೆ:1:95]ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಅದರಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೆ ಪಾಲಿಸತಕ್ಕದ್ದು.
7. ಈ ಪ್ರಾಥಮಿಕ ಶಾಲಾ ನೋಂದಾವಣೆಯು ಸರ್ಕಾರಿ ಅಧಿಸೂಚನೆ ಸಂಖ್ಯೆ: ಇಡಿ 175 ಪಿ.ಎಂ.ಸಿ 95, ದಿನಾಂಕ : 07-09-98 ಮತ್ತು ದಿನಾಂಕ : 29-12-98 ರ ಪ್ರಕಾರ ಶಾಶ್ವತ ಅನುದಾನರಹಿತವಾಗಿರುತ್ತದೆ. [Permanently without-aid]
8. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳ [ಶಿಸ್ತು ಮತ್ತು ನಿಯಂತ್ರಣ] ನಿಯಮ 1999ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು/ ಅವುಗಳಿಗೆ ಬದ್ಧವಾಗಿರತಕ್ಕದ್ದು.

---2]

9. ಕರ್ನಾಟಕ ಶಿಕ್ಷಣ ಸಂಸ್ಥೆಗಳ(ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯ ವಸ್ತುನಿಗಧೀಕರಣ ಇತ್ಯಾದಿ) ನಿಯಮಾವಳಿ 1995ರನ್ವಯ ಇಲಾಖೆ ಮತ್ತು ಸರ್ಕಾರ ನಿಗಧಿಪಡಿಸಿದ ಪಠ್ಯಪುಸ್ತಕಗಳನ್ನು ಮಾತ್ರ ಭೋಧಿಸತಕ್ಕದ್ದು ಹಾಗೂ ವಿಧ್ಯಾರ್ಥಿಗಳಿಗೆ ಪಠ್ಯಪುಸ್ತಕ ಹೊರೆಯಾಗದಂತೆ ಕ್ರಮವಹಿಸುವುದು.

10. ಕರ್ನಾಟಕ ಶಿಕ್ಷಣ ಸಂಸ್ಥೆಗಳ(ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯ ವಸ್ತುನಿಗಧೀಕರಣ ಇತ್ಯಾದಿ) ನಿಯಮಾವಳಿ 1995. ದಿನಾಂಕ:04-10-96ರ ನಿಯಮ-10ರಂತೆ ಟರ್ಮ್ ಶುಲ್ಕ, ಭೋಧನಾ ಶುಲ್ಕ, ವಿಶೇಷ ಅಭಿವೃದ್ಧಿ ಶುಲ್ಕಗಳನ್ನು ಮಾತ್ರ ವಸೂಲಿ ಮಾಡತಕ್ಕದ್ದು ಹಾಗೂ ನಿಯಮ 10(04)ರಂತೆ ಶಾಲೆಯಲ್ಲಿ ವಿದ್ಯಾರ್ಥಿ/ಪೋಷಕರಿಂದ ವಸೂಲಿ ಮಾಡುವ ಶುಲ್ಕಗಳ ವಿವರಗಳ ಒಂದು ಬ್ರೋಚರ್ ಅನ್ನು ಶಾಲೆಯ ಸೂಚನಾಫಲಕದಲ್ಲಿ ಕಡ್ಡಾಯವಾಗಿ ಪ್ರಕಟಿಸಿ, ಅದರ ಒಂದು ಪ್ರತಿಯನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ/ಉಪನಿರ್ದೇಶಕರಿಗೆ ಸಲ್ಲಿಸತಕ್ಕದ್ದು.

11. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ.39. ವಿವಿಧ-99. ದಿನಾಂಕ:14-03-2000ರ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ರೆಗ್ಯೂಲೇಷನ್ ಆಫ್ ಸರ್‌ಟನ್ ಫೀಸ್ ಅಂಡ್ ಡೊನೇಶನ್ಸ್) ನಿಯಮ-1999ರ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು ಹಾಗೂ ಈ ನಿಯಮದಂತೆ ಯಾವುದೇ ವಂತಿಗೆಯನ್ನು ವಸೂಲು ಮಾಡುವಂತಿಲ್ಲ.

12. ಅನುಮತಿ ಪಡೆದ 2 ತಿಂಗಳೊಳಗಾಗಿ ಕರ್ನಾಟಕ ಶಿಕ್ಷಣ ಕಾಯ್ದೆ 1983 (ಆಕ್ಟ್ 1 ಆಫ್ 1995) ಪ್ರಕಾರ ಸೆಕ್ಷನ್ 36 ರಿಂದ 39 ರ ರೀತ್ಯಾ ಹಾಗೂ ಇಡಿ 131 ವಿವಿಧ 98, ಬೆಂಗಳೂರು, ದಿನಾಂಕ : 04-11-99 ರಂತೆ ಮಾನ್ಯತೆ ನವೀಕರಣ ಹೊಂದಲು ಸರ್ಕಾರಿ ಅಧಿಸೂಚನೆ ಸಂಖ್ಯೆ ಇಡಿ 137 ವಿವಿಧ 98, ಬೆಂಗಳೂರು, ದಿನಾಂಕ : 19-05-99 ರ ಪ್ರಕಾರ ಸಕ್ಷಮ ಪ್ರಾಧಿಕಾರಿಗಳಿಗೆ ಅರ್ಜಿ ಸಲ್ಲಿಸತಕ್ಕದ್ದು ಹಾಗೂ ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ನಿಗಧಿತ ಭದ್ರತಾ ಠೇವಣಿಯನ್ನು ಜಿಲ್ಲಾ ಉಪ ನಿರ್ದೇಶಕರ ಹಾಗೂ ಆಡಳಿತ ಮಂಡಳಿಯ ಕಾರ್ಯದರ್ಶಿಗಳ ಜಂಟಿ ಖಾತೆಯಲ್ಲಿ ಇಡತಕ್ಕದ್ದು.

13. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ.52ವಿವಿದ.99 ದಿನಾಂಕ:-02-02-2000ರ ಅನೆಕ್ಸರ್-5ರ ನಿಯಮದಂತೆ ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ಪಾಲಿಸತಕ್ಕದ್ದು.

**14. 6ನೇ ತರಗತಿಯಿಂದ 8ನೇ ತರಗತಿಗೆ ಬಿಇಡಿ ತರಬೇತಿ ಹೊಂದಿದ ಶಿಕ್ಷಕರನ್ನು ನೇಮಿಸಿಕೊಳ್ಳತಕ್ಕದ್ದು.**

15. ಕರ್ನಾಟಕ ಶಿಕ್ಷಣ ಮಸೂದೆಯ ನಿಯಮಗಳಂತೆ ಶಾಲೆಗೆ ಒದಗಿಸಬೇಕಾದ ಮೂಲಭೂತ ಸೌಕರ್ಯಗಳಾದ ಪೀಠೋಪಕರಣ, ಪಾಠೋಪಕರಣ, ಗ್ರಂಥಾಲಯ ಮುಂತಾದ ಸೌಲಭ್ಯಗಳನ್ನು ಒಂದು ವರ್ಷದ ಒಳಗಾಗಿ ಹಾಗೂ ಆಟದ ಮೈದಾನ ಮತ್ತು ಶಾಲಾ ಕಟ್ಟಡವನ್ನು ಮೂರು ವರ್ಷದೊಳಗಾಗಿ ಒದಗಿಸಿಕೊಳ್ಳತಕ್ಕದ್ದು.

16. ಶಾಲಾ ಕೆಲಸದ ಅವಧಿ ಮತ್ತು ದಿನಗಳನ್ನು ಇಲಾಖೆಯ ನಿಯಮಗಳಂತೆ ಪಾಲಿಸತಕ್ಕದ್ದು.

17. ಶಾಲೆಯನ್ನು ಪ್ರಾರಂಭಿಸಿ ವಿದ್ಯಾರ್ಥಿಗಳ ದಾಖಲಾತಿಯನ್ನು ಶಾಲೆ ನೋಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭವಾದ ಎರಡು ತಿಂಗಳ ಒಳಗಾಗಿ ಈ ಕಛೇರಿಗೆ ತಿಳಿಸಬೇಕು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ತನ್ನಿಂದ ತಾನೇ ರದ್ದಾಗುವುದು.

18. ಈಗಾಗಲೇ 1 ರಿಂದ 7ನೇ ತರಗತಿ ಕನ್ನಡ ಮಾಧ್ಯಮ ಇದ್ದಲ್ಲಿ, ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆಯ ಮಂಜೂರಾತಿಯಿಂದ ಕನ್ನಡ ಮಾಧ್ಯಮದ ತರಗತಿಗಳಿಗೆ ಯಾವುದೇ ರೀತಿ ಧಕ್ಕೆ ಬಾರದಂತೆ ನೋಡಿಕೊಳ್ಳುವುದು.

19. ಸರ್ಕಾರದ ಸುತ್ತೋಲೆ ಸಂಖ್ಯೆ.ಇಡಿ 27 ಎಸ್‌ಇಪಿ 03 ದಿನಾಂಕ:-13-02-2003 ರ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸಿ, ಶಾಲೆಯಲ್ಲಿ ನೇಮಕಗೊಂಡಿರುವ ಶಿಕ್ಷಕರ/ಸಿಬ್ಬಂದಿ ಸೇವಾ ವಿವರಗಳನ್ನು ನಿಯಮಾನುಸಾರ ದಾಖಲು ಮಾಡಿ ಕಡ್ಡಾಯವಾಗಿ ನಿರ್ವಹಿಸುವುದು.

20. ಶಿಕ್ಷಕರನ್ನು ಗಣತಿ ಕಾರ್ಯಕ್ಕೆ ತಪ್ಪದೇ ನಿಯೋಜಿಸುವುದು.

21. ಪ್ರಸ್ತಾವನೆಯಲ್ಲಿ ಸಲ್ಲಿಸಿರುವ ದಾಖಲೆಗಳು ಸುಳ್ಳು ದಾಖಲೆಗಳೆಂದು ಕಂಡು ಬಂದಲ್ಲಿ ಈ ನೋಂದಣಿಯನ್ನು ರದ್ದುಪಡಿಸಲಾಗುವುದು.

22. ಪ್ರತಿ ತರಗತಿಯಲ್ಲಿ ವಿದ್ಯಾರ್ಥಿಗಳ ಸಂಖ್ಯೆ. 50 ಕ್ಕೆ ಮೀರಬಾರದು.

23. ಅನುಮತಿ ನೀಡಿದ 5 ವರ್ಷಗಳವರೆಗೆ ಶಾಲಾ ಸ್ಥಳಾಂತರ ಮತ್ತು ಹಸ್ತಾಂತರಕ್ಕೆ ಅವಕಾಶವಿರುವುದಿಲ್ಲ.

24. ಸರ್ಕಾರದ ಪತ್ರದ ಸಂಖ್ಯೆ:ಇಡಿ:122;ಎಸ್.ಇ.ಎಸ್.2007 ಬೆಂಗಳೂರು ದಿನಾಂಕ:17.05.2007 ರ ಪತ್ರದಲ್ಲಿನ ಷರತ್ತುಗಳನ್ನು ಪೂರೈಸತಕ್ಕದ್ದು.

25. 1 ರಿಂದ 5 ನೇ ತರಗತಿವರೆಗೆ ಯಾವ ಮಾಧ್ಯಮದಲ್ಲಿ ನೋಂದಣಿ ನೀಡಲಾಗಿದೆಯೋ ಅದೇ ಮಾಧ್ಯಮದಲ್ಲಿ ಶಾಲೆಯನ್ನು ನಡೆಸತಕ್ಕದ್ದು.

[ಎಸ್.ಆರ್.ಉಮಾಶಂಕರ್]
ಆಯುಕ್ತರು ಹಾಗೂ ನೋಂದಣಿ ಅಧಿಕಾರಿಗಳು,

ಪ್ರತಿಯನ್ನು.

1. ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಮಂಡ್ಯ ಜಿಲ್ಲೆ ರವರಿಗೆ,
2. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಕೆ.ಆರ್.ಪೇಟೆ ತಾಲ್ಲೂಕು.
3. ಕಾರ್ಯದರ್ಶಿಗಳು, ಗ್ರಾಮಭಾರತಿ ವಿದ್ಯಾ ಸಂಸ್ಥೆ [ರಿ], ಮೈಸೂರು-ಚನ್ನರಾಯಪಟ್ಟಣ ರಸ್ತೆ, ಕೆ.ಆರ್.ಪೇಟೆ ಟೌನ್, ಮಂಡ್ಯ ಜಿಲ್ಲೆ.
4. ಕಛೇರಿ ಪ್ರತಿ.